65 ಶ್ರೀ ರೋಷನ್ ಬೇಗ್ ಆರ್.(ಶಿವಾಜಿನಗರ)
ಮಾನ್ಯ ಅಬಕಾರಿ, ವಾರ್ತಾ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು

ಅ) ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಲ್ಲಿ ಗ್ಯಾಂಗ್‌ಮನ್‌ಗಳ ಕೊರತೆಯಿರುವುದು ನಿಜವಲ್ಲವೇ;

ಹೌದು

ಆ) ಹಾಗಿದ್ದಲ್ಲಿ, ರಾಜ್ಯ ಸರ್ಕಾರವು ಯಾವ ಕ್ರಮವನ್ನು ಕೈಗೊಂಡಿದೆ?

ಪ್ರಸ್ತುತ ಮಂಡಳಿಯ ದೈನಂದಿನ ವಾಲ್ವ್‌ಮನ್ ಕೆಲಸ ನಿರ್ವಹಿಸುವ ಸಂಬಂಧ ಭದ್ರತಾ ಸೇವಾ ಸಂಸ್ಥೆಯಿಂದ ವಾಲ್ವ್‌ಮನ್ ಕೆಲಸಕ್ಕಾಗಿ ಸಿಬ್ಬಂದಿಗಳನ್ನು ಪಡೆಯಲಾಗಿದೆ. 193 ವಾಲ್ವ್‌ಮನ್ ಹುದ್ದೆಗಳ ಭರ್ತಿಗಾಗಿ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ.

67 ಶ್ರೀ ಮಹದೇವ ಪ್ರಸಾದ ಹೆಚ್.ಎಸ್
ಜಿ.ಜನಾರ್ಧನ ರೆಡ್ಡಿ(ಪ್ರವಾಸೋದ್ಯಮ ಹಾಗೂ ಮೂಲ ಸೌಲಭ್ಯ ಸಚಿವರು)

ಅ) ಶ್ರೀ ಮಲೈಮಹದೇಶ್ವರ ಬೆಟ್ಟಕ್ಕೆ ಅತಿ ಗಣ್ಯರು ಹಾಗೂ ಗಣ್ಯ ವ್ಯಕ್ತಿಗಳು ಭೇಟಿ ನೀಡಲು ಹೆಲಿಪ್ಯಾಡ್ ನಿರ್ಮಾಣ ಮಾಡುವ ಪ್ರಸ್ತಾವ ಸರ್ಕಾರದ ಮುಂದೆ ಇದೆಯೇ;

ಇಲ್ಲ

ಆ) ಹಾಗಿದ್ದಲ್ಲಿ, ಹೆಲಿಪ್ಯಾಡ್ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಉದ್ಭವಿಸುವುದಿಲ್ಲ.

69 ಶ್ರೀ ಮಹದೇವಪ್ರಸಾದ.ಹೆಚ್.ಎಸ್ (ಗುಂಡ್ಲುಪೇಟೆ)
ಜಿ.ಜನಾರ್ಧನ ರೆಡ್ಡಿ(ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು)

ಅ) ಚಾಮರಾಜನಗರ ಜಿಲ್ಲೆಯ ಪ್ರವಾಸಿ ಕೇಂದ್ರಗಳಿಗೆ ಮೂಲ ಸೌಕರ್ಯ ಒದಗಿಸಿ ಅಭಿವೃದ್ಧಿಪಡಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

ಹೌದು

ಆ) ಹಾಗಿದ್ದಲ್ಲಿ, ಸರ್ಕಾರ ಪ್ರವಾಸೋದ್ಯಮ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು?

ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯ ಅಂಗವಾಗಿ ಕೆಳಕಂಡ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ.